**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ರವಿಕುಮಾರ್ ಎನ್, ಇವರ ನಿಯಮ 330ರಡಿ ಗಮನ ಸೆಳೆಯುವ ಸೂಚನೆಗೆ ಮಾನ್ಯ ಇಲಾಖಾ ಸಚಿವರ ಉತ್ತರ.**

*****

**ಸೂಚನೆ:**

**ರಾಜ್ಯಾದ್ಯಂತ ಇರುವ ಕೆ.ಎಸ್.ಆರ್.ಟಿ ಬಸ್ ನಿಲ್ದಾಣ ಮತ್ತು ಬೆಂಗಳೂರು ಮೆಜೆಸ್ಟಿಕ್ ಬಸ್ ನಿಲ್ದಾಣ ಸೇರಿದಂತೆ ಹಾಗೂ ದೂರದ ಊರಿಗೆ ಪ್ರಯಾಣಿಸುವ ಬಸ್ಸುಗಳು ಊಟ ಮಾಡುವ ಸ್ಥಳದಲ್ಲಿ ಆಹಾರ ಪೊಟ್ಟಣ ಮತ್ತು ತಂಪು ಪಾನೀಯಗಳನ್ನು ಅದರಲ್ಲಿ ಮುದ್ರಿಸಿರುವ ಎಮ್.ಆರ್.ಪಿ (MRP) ಬೆಲೆಗಿಂತ ಹೆಚ್ಚಿನ ದರದಲ್ಲಿ ಮಾರುತ್ತಿರುವ ಬಗ್ಗೆ ಸಾರ್ವಜನಿಕರಿಂದ ದೂರುಗಳು ಬಂದಿವೆ. ಈ ಅಂಶಗಳನ್ನು ಪರಿಗಣಿಸಿದಾಗ ಆಹಾರ ಪೊಟ್ಟಣ ಮತ್ತು ತಂಪು ಪಾನೀಯಗಳನ್ನು ಗರಿಷ್ಟ ಮುದ್ರಿತ ಬೆಲೆಗಿಂತ ಹೆಚ್ಚಿನ ಬೆಲೆಯಲ್ಲಿ ಮಾರಾಟ ಮಾಡುವುದನ್ನು ತಡೆಗಟ್ಟುವ ವಿಚಾರವನ್ನು ಮಾನ್ಯ ಸದಸ್ಯರು ಈ ಅಧೀವೇಶನದಲ್ಲಿ ಪ್ರಸ್ತಾಪಿಸಿರುವ ಕುರಿತು.**

**<u>ಉತ್ತರ:</u>**

- ರಾಜ್ಯಾದ್ಯಂತ ಇರುವ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣ ಮತ್ತು ಬೆಂಗಳೂರು ಮೆಜೆಸ್ಟಿಕ್ ಬಸ್ ನಿಲ್ದಾಣ ಸೇರಿದಂತೆ ಹಾಗೂ ಎಲ್ಲಾ ಸಾರ್ವಜನಿಕ ಜನನಿಬಿಡ ಸ್ಥಳಗಳಲ್ಲಿನ ಎಲ್ಲಾ ಚಿಲ್ಲರೆ ಮಾರಾಟಗಾರರು, ಆಹಾರ ಪದಾರ್ಥಗಳನ್ನು ಅದರ ಮೂಲ ದರಕ್ಕಿಂತ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿರುವವರ ವಿರುದ್ಧ ಕಾನೂನು ಮಾಪನಶಾಸ್ತ್ರ ಇಲಾಖಾ ಕ್ಷೇತ್ರಾಧಿಕಾರಿಗಳು ಆಗಿಂದಾಗ್ಗೆ ಅನಿರೀಕ್ಷಿತ ತಪಾಸಣಾ ಕಾರ್ಯಗಳನ್ನು ನಡೆಸಿ, ಎಂ.ಆರ್.ಪಿ ಮುದ್ರಿತ ದರಕ್ಕಿಂತ ಹೆಚ್ಚಿನ ದರಕ್ಕೆ ಮಾರಾಟ ಮಾಡುತ್ತಿರುವ ಪ್ರಕರಣಗಳು ಕಂಡು ಬಂದಲ್ಲಿ ತಪ್ಪಿತಸ್ಥರ ವಿರುದ್ಧ ದಿ ಲೀಗಲ್ ಮೆಟ್ರಾಲಜಿ (ಪೊಟ್ಟಣ ಸಾಮಗ್ರಿ) ನಿಯಮಗಳು 2011ರ ನಿಯಮಗಳಡಿ ಮೊಕದ್ದಮೆಗಳನ್ನು ದಾಖಲಿಸಲಾಗುತ್ತಿದ್ದು, ಈ ಪ್ರಕರಣಗಳನ್ನು ನಿಯಮಾನುಸಾರ ಇತ್ಯರ್ಥಪಡಿಸಿ ಅಭಿಸಂಧಾನ ದಂಡವನ್ನು ಸಂಗ್ರಹಿಸಲಾಗುತ್ತಿದೆ ಹಾಗೂ ಅಭಿಸಂಧಾನ ದಂಡವನ್ನು ಭರಿಸಲು ನಿರಾಕರಿಸುವವರ ವಿರುದ್ಧ ಸಂಬಂಧಿಸಿದ ಕ್ಷೇತ್ರವ್ಯಾಪ್ತಿಯ ಜೆ.ಎಂ.ಎಫ್.ಸಿ. ನ್ಯಾಯಾಲಯದಲ್ಲಿ ದಾವೆ ಹೂಡಲಾಗುತ್ತಿದ್ದು, ಮಾನ್ಯ ನ್ಯಾಯಾಲಯದ ಆದೇಶದಂತೆ ಕ್ರಮ ಕೈಗೊಳ್ಳಲಾಗುತ್ತಿದೆ.

- ಅಲ್ಲದೆ ಎಂ.ಆರ್.ಪಿ ಮುದ್ರಿತ ದರಕ್ಕಿಂತ ಹೆಚ್ಚಿನ ದರವನ್ನು ಪಡೆಯುತ್ತಿರುವ ಕುರಿತಂತೆ ಸಾರ್ವಜನಿಕರಿಂದ ಈ ಇಲಾಖೆಗೆ ದೂರುಗಳು ಬಂದಲ್ಲಿ, ಕೂಡಲೇ ದೂರುಗಳ ಕುರಿತಂತೆ ಇಲಾಖೆಯ ಕ್ಷೇತ್ರಾಧಿಕಾರಿಗಳು ಅನಿರೀಕ್ಷಿತ ತಪಾಸಣೆಗಳನ್ನು ನಡೆಸಿ ಉಲ್ಲಂಘನೆ ಕಂಡುಬಂದಲ್ಲಿ, ತಪ್ಪಿತಸ್ಥರ ವಿರುದ್ಧ ಮೊಕದ್ದಮೆಗಳನ್ನು ದಾಖಲಿಸಿ, ಮುದ್ರಿತ ಬೆಲೆಗಿಂತ ಹೆಚ್ಚಿನ ಬೆಲೆಗೆ ಮಾರಾಟ ಮಾಡದಂತೆ ಸಂಬಂಧಪಟ್ಟ ಸಂಸ್ಥೆ ಮಾಲೀಕರುಗಳಿಗೆ ಎಚ್ಚರಿಕೆಗಳನ್ನು ನೀಡಲಾಗುತ್ತಿದೆ.

- ಕಾನೂನು ಮಾಪನಶಾಸ್ತ್ರ ಇಲಾಖೆಯ ಕ್ಷೇತ್ರಾಧಿಕಾರಿಗಳು ಹೆಚ್ಚಿನ ಮೌಲ್ಯದ ವಹಿವಾಟು ಸಂಸ್ಥೆಗಳಾದ ಪೆಟ್ರೋಲ್/ಡೀಸೆಲ್ ಬಂಕ್, ಮಲ್ಟಿಪ್ಲೆಕ್ಸ್-ಮಾಲ್, ರೈತರ ಸಂತೆ, ಹಾಲಿನ ಬೂತ್‌ಗಳು, ಚಿಲ್ಲರೆ ಮಾರಾಟ ಮಳಿಗೆಗಳು, ಹಾಗೂ ಇನ್ನಿತರ ಹೆಚ್ಚಿನ ಜನನಿಬಿಡ ಸ್ಥಳಗಳಲ್ಲಿ ಮತ್ತು ಬಸ್ ಸ್ಟ್ಯಾಂಡ್, ರೈಲ್ವೇ ಸ್ಟೇಷನ್, ವಿಮಾನ ನಿಲ್ದಾಣ ಮುಂತಾದ ಸಾರ್ವಜನಿಕ ಸ್ಥಳಗಳಲ್ಲಿ ಪೊಟ್ಟಣ ಸಾಮಗ್ರಿ, ನಿಯಮಗಳಿಗೆ ಸಂಬಂಧಿಸಿದಂತೆ ಗ್ರಾಹಕರಿಗೆ ಮೋಸವಾಗುವುದನ್ನು ತಡೆಗಟ್ಟುವ ನಿಟ್ಟಿನಲ್ಲಿ ಇಲಾಖೆಯ ಟೋಲ್-ಫ್ರೀ ಸಂಖ್ಯೆ:1800 599 1100 ನ್ನು ಸಂಪರ್ಕಿಸುವಂತೆ ಹಾಗೂ ಇ-ಮೇಲ್ ವಿಳಾಸ: <u>clm-lm-ka@nic.in</u> ಗೆ ದೂರು ಸಲ್ಲಿಸುವಂತೆ ಸೂಚನಾ ಫಲಕವನ್ನು ಅಳವಡಿಸುವಂತೆ ಸಂಬಂಧಪಟ್ಟ ಸಂಸ್ಥೆಗಳಿಗೆ ಸೂಚಿಸಲಾಗಿರುತ್ತದೆ.

* ಕಾನೂನು ಮಾಪನಶಾಸ್ತ್ರ ಇಲಾಖೆಯಲ್ಲಿ 2022-23 ಮತ್ತು 2023-24ರ ಸಾಲಿನಲ್ಲಿ ಎಂ.ಆರ್.ಪಿ ದರಕ್ಕಿಂತ ಹೆಚ್ಚಿನ ದರಕ್ಕೆ ಮಾರಾಟ ಮಾಡುತ್ತಿರುವ ಕುರಿತಂತೆ ತಪಾಸಣೆ ನಡೆಸಿ ಮೊಕದ್ದಮೆ ದಾಖಲಿಸಿರುವ ಅಂಕಿಅಂಶಗಳು ಈ ಕೆಳಗಿನಂತಿದೆ:

| ಕ್ರ.ಸಂ | ವರ್ಷ | ನಡೆಸಲಾದ ತಪಾಸಣೆಗಳ ಸಂಖ್ಯೆ | ಹೂಡಿ ಮೊಕದ್ದಮೆಗಳ ಸಂಖ್ಯೆ | ವಸೂಲಾದ ಅಭಿಸಂಧಾನ ದಂಡದ ಮೊತ್ತ |
|---|---|---|---|---|
| 1 | 2022-23 | 917 | 138 | 786000/- |
| 2 | 2023-24 | 894 | 111 | 616000/- |
| ಒಟ್ಟು | | 1811 | 249 | 1402000/- |

**ಸಂಖ್ಯೆ**: ಆನಾಸ 32 ಕಾಮಾಸೇ 2024

(ಕೆ.ಹೆಚ್ ಮುನಿಯಪ್ಪ)

ಆಹಾರ, ನಾಗರಿಕ ಸರಬರಾಜು ಮತ್ತು

ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು

ಮಾಪನಶಾಸ್ತ್ರ ಇಲಾಖಾ ಸಚಿವರು.